## ಕರ್ನಾಟಕ ಸರ್ಕಾರ

ಸಂಖ್ಯೆ:ಕಂಇ 36 ಮುಅಬಿ 2020

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:14-07-2020

ಇಂದ,

ಸರ್ಕಾರದ ಪ್ರಧಾನ ಕಾರ್ಯದರ್ಶಿ,
(ವಿಪತ್ತು ನಿರ್ವಹಣೆ, ಭೂಮಿ ಮತ್ತು ಯುಪಿಓಆರ್)
ಕಂದಾಯ ಇಲಾಖೆ,
ಬೆಂಗಳೂರು.

ಇವರಿಗೆ,

ಎಲ್ಲಾ ಜಿಲ್ಲಾಧಿಕಾರಿಗಳು

ಮಾನ್ಯರೆ,

ವಿಷಯ:- ಕರ್ನಾಟಕ ರಾಜ್ಯದಲ್ಲಿರುವ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣರಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ವಿತರಿಸುವ ಕುರಿತು.

ಉಲ್ಲೇಖ:-
1. ಸರ್ಕಾರದ ಆದೇಶ ಸಂಖ್ಯೆ:ಕಂಇ 136 ಮುಅಬಿ 2018 ದಿನಾಂಕ:18.02.2019 ಮತ್ತು 12.07.2019.
2. ಭಾರತ ಸರ್ಕಾರದ ಅಧಿಸೂಚನೆ ಸಂಖ್ಯೆ:PAUSHA 22, 1940 (SAKA) Dated:12.01.2019.
3. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 75 ಬಿಸಿಎ 2019. ದಿನಾಂಕ:14.05.2019
4. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅನಧಿಕೃತ ಟಿಪ್ಪಣಿ ಸಂಖ್ಯೆ:ಹಿಂವಕ 72 ಬಿಸಿಎ 2020 ದಿನಾಂಕ:24.06.2020.

/ * /

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಸರ್ಕಾರದ ಆದೇಶದಲ್ಲಿ ರಾಜ್ಯದಲ್ಲಿ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮಾಜದವರಿಗೆ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಸ್ವಯಂ ಉದ್ಯೋಗ ಹಾಗೂ ಇನ್ನಿತರೆ ಸೌಕರ್ಯಗಳನ್ನೊಳಗೊಂಡಂತೆ ಯೋಜನೆಗಳನ್ನು ಜಾರಿಗೆ ತರುವ ಉದ್ದೇಶಕ್ಕಾಗಿ ಕರ್ನಾಟಕ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯನ್ನು ಸ್ಥಾಪಿಸಲಾಗಿರುತ್ತದೆ.

ಉಲ್ಲೇಖ (2)ರಲ್ಲಿ ಭಾರತ ಸರ್ಕಾರದ ಅಧಿಸೂಚನೆಯಲ್ಲಿ ಭಾರತ ಸಂವಿಧಾನ (ಒಂದು ನೂರ ಮೂರನೇ ತಿದ್ದುಪಡಿ) ಕಾಯ್ದೆ 2019 ರನ್ವಯ ಅನುಚ್ಛೇದ (6) ರಲ್ಲಿ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಮತ್ತು 16(6) ರಲ್ಲಿ ನಾಗರಿಕ ಹುದ್ದೆಗಳಲ್ಲಿ ಆರ್ಥಿಕವಾಗಿ ಹಿಂದುಳಿದ ವರ್ಗಗಳಿಗೆ ಗರಿಷ್ಠ ಶೇ.10 ರಷ್ಟು ಮೀಸಲಾತಿ ಒದಗಿಸಲು ಅವಕಾಶ ಕಲ್ಪಿಸಿ ಆದೇಶ ಹೊರಡಿಸಲಾಗಿರುತ್ತದೆ.

ಉಲ್ಲೇಖ (3) ರ ಸರ್ಕಾರದ ಆದೇಶದಲ್ಲಿ ಭಾರತ ಸರ್ಕಾರದ ನಾಗರೀಕ ಹುದ್ದೆಗಳು, ಸೇವೆಗಳು ಮತ್ತು ಶಿಕ್ಷಣ ಸಂಸ್ಥೆಗಳಲ್ಲಿ ಆರ್ಥಿಕವಾಗಿ ಹಿಂದುಳಿದ ವರ್ಗಗಳು ಮೀಸಲಾತಿ

ಸೌಲಭ್ಯವನ್ನು ಪಡೆಯಲು ರಾಜ್ಯದ ಅರ್ಹ ಅಭ್ಯರ್ಥಿ/ವಿದ್ಯಾರ್ಥಿಗಳಿಗೆ ಭಾರತ ಸರ್ಕಾರದ ಸಿಬ್ಬಂದಿ, ಕುಂದುಕೊರತೆ ಮತ್ತು ಪಿಂಚಣಿ ಮಂತ್ರಾಲಯದ ಅಧಿಕೃತ ಜ್ಞಾಪನ ಸಂಖ್ಯೆ:F.No 36039/1/2019-Estt.(Res) ದಿನಾಂಕ:19.01.2019 ಮತ್ತು ದಿನಾಂಕ:31.01.2019 ಹಾಗೂ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ಅಧಿನಿಯಮ 1990 ಮತ್ತು ನಿಯಮಗಳು 1992 ರನ್ವಯ ಸಕ್ಷಮ ಪ್ರಾಧಿಕಾರಗಳು ಅನುಬಂಧ-2 ರಲ್ಲಿನ ಜಾತಿ ಪಟ್ಟಿಯಲ್ಲಿನ ಅರ್ಹ ಅಭ್ಯರ್ಥಿಗಳಿಗೆ (ಕ್ರಮ ಸಂಖ್ಯೆ:140 ರಲ್ಲಿ ಬ್ರಾಹ್ಮಣ ಪದವೂ ಒಳಗೊಂಡಿದೆ.) ರಾಜ್ಯ ಸರ್ಕಾರಕ್ಕೆ ಯಾವುದೇ ಆರ್ಥಿಕ ಹೊರೆ ಆಗದಂತೆ ಅನುಬಂಧ-1 ರಲ್ಲಿನ ಆದಾಯ ಮತ್ತು ಸ್ವತ್ತುಗಳ ಪ್ರಮಾಣ ಪತ್ರ ಒದಗಿಸಲು ಅನುಮತಿ ನೀಡಿ ಆದೇಶಿಸಲಾಗಿರುತ್ತದೆ.

ಉಲ್ಲೇಖ(4) ರಲ್ಲಿನ ಅನಧಿಕೃತ ಟಿಪ್ಪಣಿಯಲ್ಲಿ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಅಭಿವೃದ್ಧಿ ಯೋಜನೆಗಳ ಸೌಲಭ್ಯ ಪಡೆಯುವ ಉದ್ದೇಶಕ್ಕಾಗಿ ಫಲಾನುಭವಿಗಳನ್ನು ಗುರುತಿಸುವ ಸಲುವಾಗಿ ಮಾತ್ರ ಪ್ರಮಾಣಪತ್ರಗಳನ್ನು ನೀಡುವ ಅವಶ್ಯಕತೆಯಿರುತ್ತದೆ. ಆದುದರಿಂದ ಆಡಳಿತ ಇಲಾಖೆಯಾದ ಕಂದಾಯ (ಮುಜರಾಯಿ) ಇಲಾಖೆಯೇ ಕೆಲವೊಂದು ಅರ್ಹತಾ ಮಾನದಂಡಗಳನ್ನು ನಿಗದಿಗೊಳಿಸಬೇಕಾಗುತ್ತದೆ, ಹಾಗೂ ಕೇಂದ್ರ ಸರ್ಕಾರದ ಸಿಬ್ಬಂದಿ ಮತ್ತು ತರಬೇತಿ ಇಲಾಖೆಯ ಆದಾಯ ಸ್ವತ್ತುಗಳ ಪ್ರಮಾಣಪತ್ರ ಅನುಬಂಧ-1ರ ನಮೂನೆಯನ್ನು ಅಳವಡಿಸಿಕೊಂಡು ಕೆಲವೊಂದು ಅರ್ಹತಾ ಮಾನದಂಡಗಳನ್ನು ನಿಗದಿಗೊಳಿಸಿ, ಆಡಳಿತ ಇಲಾಖೆಯಾದ ಕಂದಾಯ (ಮುಜರಾಯಿ) ಇಲಾಖೆಯು ಪ್ರಮಾಣಪತ್ರವನ್ನು ನೀಡಬಹುದೆಂದು ಅಭಿಪ್ರಾಯಿಸಿದೆ.

ಆದರೆ ಉಲ್ಲೇಖ (2)ರ ಆದೇಶದಂತೆ ವಿತರಿಸಬೇಕಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ವಿತರಿಸಲು ತಹಶೀಲ್ದಾರರು ನಿರಾಕರಿಸುತ್ತಿರುವುದಾಗಿ ಸರ್ಕಾರದ ಗಮನಕ್ಕೆ ಬಂದಿದ್ದು, ಈ ಬಗ್ಗೆ ಎಲ್ಲಾ ಜಿಲ್ಲಾಧಿಕಾರಿಗಳು ಕೂಡಲೇ ಕ್ರಮ ಕೈಗೊಂಡು ಅರ್ಹ ಬ್ರಾಹ್ಮಣರಿಗೆ ಸೂಕ್ತ ಜಾತಿ ಆದಾಯ ಪ್ರಮಾಣ ಪತ್ರವನ್ನು ವಿತರಿಸಲು ಎಲ್ಲಾ ತಹಶೀಲ್ದಾರರಿಗೆ ನಿರ್ದೇಶನ ನೀಡಲು ಸೂಚಿಸಿದೆ. ಸದರಿ ಪ್ರಮಾಣ ಪತ್ರವನ್ನು ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯಿಂದ ವಿವಿಧ ಯೋಜನೆಗಳಿಗೆ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ, ಪರಿಗಣಿಸಲು ಅನುಮತಿ ನೀಡಿದೆ.

ಈ ಕುರಿತು ಕ್ರಮ ಕೈಗೊಂಡು, ಸದರಿ ಪ್ರಮಾಣ ಪತ್ರದಲ್ಲಿ ಸೂಕ್ತ ನಮೂದುಮಾಡಲು ನಿರ್ದೇಶಕರು, ಅಟಲ್ ಜನಸ್ನೇಹಿ ನಿರ್ದೇಶನಾಲಯ, ಇವರಿಗೆ ಸೂಚಿಸಿದೆ.

ತಮ್ಮ ನಂಬುಗೆಯ,
M.L.Varalakshmi
(ಎಂ.ಎಲ್.ವರಲಕ್ಷ್ಮಿ) 14/7/2020
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಮುಜರಾಯಿ)